ಸಾಕ್ಷಿಗೆ ಕ್ರಮಬದ್ಧವಾಗಿ ಪ್ರಮಾಣ ವಚನವನ್ನು ಬೋಧಿಸಲಾಯಿತು.

ಮುಖ್ಯ ವಿಚಾರಣೆ ವಾದಿ ಪರ ಶ್ರೀ ಸಿ.ಆರ್.ಎಸ್ ವಕೀಲರಿಂದಃ-

ನಾನು ಈಗ ಹಾಜರುಪಡಿಸಿದ ಪ್ರಮಾಣ ಪತ್ರವನ್ನು ನನ್ನ ಮುಖ್ಯ ವಿಚಾರಣೆಯನ್ನಾಗಿ ಪರಿಗಣಿಸಲು ಕೋರುತ್ತೇನೆ. ಪ್ರಮಾಣ ಪತ್ರದಲ್ಲಿನ ಎಲ್ಲಾ ಅಂಶಗಳು ಸತ್ಯವಾಗಿವೆ ಮತ್ತು ಅದರಲ್ಲಿ ನನ್ನ ಸಹಿ ಇರುತ್ತದೆ ಎಂದು ಪ್ರಮಾಣೀಕರಿಸುತ್ತೇನೆ.

1 ನೇ ವಾದಿ ನನಗೆ ಬರೆದುಕೊಟ್ಟಿರುವ ವಿಶೇಷ ಅಧಿಕಾರ ಪತ್ರವನ್ನು ಹಾಜರುಪಡಿಸಿದ್ದು ಅದನ್ನು ನಿಪಿ-1 ಎಂದು, ವಂಶವೃಕ್ಷವನ್ನು ಹಾಜರುಪಡಿಸಿದ್ದು ಅದನ್ನು ನಿಪಿ-2 ಎಂದು, ದಿನಾಂಕ 04.06.2004 ರಂದು ಆದ ಕ್ರಯ ಪತ್ರದ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಪಿ-3 ಎಂದು, ದಾವಾ ಆಸ್ತಿಗೆ ಸಂಬಂಧಿಸಿದಂತೆ ಇಸಿ ಅನ್ನು ಹಾಜರುಪಡಿಸಿದ್ದು ಅದನ್ನು ನಿಪಿ-4 ಎಂದು ಗುರುತಿಸಲಾಯಿತು.

ಮುಂದುವರೆದ ಮುಖ್ಯ ವಿಚಾರಣೆಗೆ ವಕೀಲರು ಸಮಯ ಕೋರಿದ ಕಾರಣ ಮುಂದೂಡಲಾಯಿತು.

(ಸಾಕ್ಷಿಯು ಕೊಟ್ಟ ಸಾಕ್ಷ್ಯವನ್ನು ಬಹಿರಂಗ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಗಣಕೀಕರಿಸಿದೆ)

(ಸಾಕ್ಷಿಗೆ ಸಾಕ್ಷ್ಯವನ್ನು ಓದಿ ಹೇಳಲಾಗಿ ಕೇಳಿ ಸರಿ ಇದೆ ಎಂದು ಒಪ್ಪಿದ್ದಾರೆ)

(ಮಹೇಶ್ ಬಿ.ಟಿ)
ಅಪರ ಹಿರಿಯ ಸಿವಿಲ್ ನ್ಯಾಯಾಧೀಶರು,
ರಾಮನಗರ.